ಶಾಸನ ರಚನಾ ಕಾರ್ಯಕಲಾಪಗಳು

೧) ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲಿನ ತೆರಿಗೆ ವಿಧಿಸುವ (ಮೂರನೇ ತಿದ್ದುಪಡಿ) ವಿಧೇಯಕ, ೧೯೮೬ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ

ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲಿನ ತೆರಿಗೆ ವಿಧಿಸುವ (ಮೂರನೇ ತಿದ್ದುಪಡಿ) ವಿಧೇಯಕ, ೧೯೮೬ರನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ,

"೧೯೮೬ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲಿನ ತೆರಿಗೆ ವಿಧಿಸುವ (ಮೂರನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಡನೆಗೆ ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೇ,

೧೯೮೬ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶದೊಳಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲಿನ ತೆರಿಗೆ ವಿಧಿಸುವ (ಮೂರನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

*ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೨) ೧೯೮೬ನೇ ಇಸವಿಯ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

೫–೦೦ಪಿ. ಎಂ.

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ೧೯೮೬ನೇ ಇಸವಿಯ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ,

"೧೯೮೬ನೇ ಇಸವಿಯ ಕರ್ನಾಟಕ ವ್ಯವಸಾಯ ಆದಾಯ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

---

* Annexure